# Akashvani : Bangalore
# Regional Bulletin In Kannada
# 22.05.2026 / 18.40   hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**22.05.2026 / 18.40   hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಪುನೀತ್ ಹೃದಯಜ್ಯೋತಿ ಯೋಜನೆ ರಾಜ್ಯದ ಎಲ್ಲಾ ತಾಲೂಕುಗಳಿಗೆ ವಿಸ್ತರಣೆ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್

೨. ಮುಂಗಾರು ಹಂಗಾಮಿಗೆ ಅಗತ್ಯ ಪ್ರಮಾಣದ ಬಿತ್ತನೆ ಬೀಜ ಲಭ್ಯ ; ರೈತರು ಆತಂಕ ಪಡುವ ಅಗತ್ಯವಿಲ್ಲ ; ಕೃಷಿ ಇಲಾಖೆ ಸ್ಪಷ್ಟನೆ

೩. ಎನ್‌ಸಿಇಆರ್‌ಟಿಯಲ್ಲಿ ಅಂತರ್ಜಲ ಕುರಿತ ಪ್ರತ್ಯೇಕ ಪಠ್ಯಕ್ರಮ ಅಳವಡಿಸುವಂತೆ ಕೇಂದ್ರಕ್ಕೆ ಸಚಿವ ಎಂ.ಬೋಸರಾಜು ಪತ್ರ

೪. ಕಲಬುರಗಿಯಲ್ಲಿ ಪಿಎಂ ಮಿತ್ರ, ಜವಳಿ ಪಾರ್ಕ್ ಕಾಮಗಾರಿ ಚುರುಕುಗೊಳಿಸಲು ಸಚಿವರ ಸಭೆಯಲ್ಲಿ ತೀರ್ಮಾನ

೫. ದುಬಾರೆ ದುರಂತ ಪ್ರಕರಣ ; ಇಬ್ಬರು ಅರಣ್ಯಾಧಿಕಾರಿಗಳ ವಿರುದ್ಧ ಉಪಲೋಕಾಯುಕ್ತರಿಂದ ಸ್ವಯಂ ಪ್ರೇರಿತ ಪ್ರಕರಣ ದಾಖಲು

**<><*<><>*><>**

ಹೃದಯಾಘಾತದ ಬಳಿಕ ನಿರ್ಣಾಯಕ ಅವಧಿಯಲ್ಲಿ ತ್ವರಿತ ಚಿಕಿತ್ಸೆ ಒದಗಿಸುವ ಉದ್ದೇಶದಿಂದ ಜಾರಿಗೆ ತಂದಿರುವ 'ಪುನೀತ್ ಹೃದಯಜ್ಯೋತಿ' ಯೋಜನೆಯನ್ನು ಶೀಘ್ರವೇ ರಾಜ್ಯದ ಎಲ್ಲಾ ತಾಲೂಕುಗಳಿಗೂ ವಿಸ್ತರಣೆ ಮಾಡಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವೆನ್ಲಾಕ್ ಜಿಲ್ಲಾ ಆಸ್ಪತ್ರೆ ಮಂಗಳೂರು ವತಿಯಿಂದ ನಡೆದ ಆರೋಗ್ಯ ಇಲಾಖೆ ಹಾಗೂ ವೆನ್ಲಾಕ್ ಆಸ್ಪತ್ರೆಯ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಒಟ್ಟು ೭೮ ಪುನೀತ್ ಹೃದಯ ಜ್ಯೋತಿ ಕೇಂದ್ರಗಳು ಜೀವರಕ್ಷಕವಾಗಿ ಕಾರ್ಯ ನಿರ್ವಹಿಸುತ್ತಿವೆ. ದಕ್ಷಿಣಕನ್ನಡ ಜಿಲ್ಲೆಯಲ್ಲೂ ಮೂರು ಕೇಂದ್ರಗಳಿದ್ದು, ಇವುಗಳ ಮೂಲಕ ಈ ವರ್ಷ ೪೫೦ ಜೀವಗಳನ್ನು ಉಳಿಸಲಾಗಿದೆ. ಈ ಯೋಜನೆಯಡಿ ನೀಡಲಾಗುವ ಟೆನೆಕ್ಟೆಪ್ಲೇಸ್ ಎಂಬ ದುಬಾರಿ ಚುಚ್ಚುಮದ್ದನ್ನು ಸರ್ಕಾರದಿಂದ ಉಚಿತವಾಗಿ ನೀಡುವ ಜೊತೆಗೆ ಅಗತ್ಯ ಶಸ್ತ್ರ ಚಿಕಿತ್ಸೆ ಹಾಗೂ ಇತರ ಚಿಕಿತ್ಸೆಯನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ವೆನ್ಲಾಕ್ ಆಸ್ಪತ್ರೆಯಲ್ಲಿ ಈಗಾಗಲೇ ಆಂಜಿಯೋಪ್ಲಾಸ್ಟಿ, ಕಿಮೋಥೆರಪಿ, ಡಯಾಲಿಸಿಸ್, ನ್ಯೂರೋಸರ್ಜರಿಗಳನ್ನು ಮಾಡಲಾಗುತ್ತಿದ್ದು, ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಾಗಿ ರೂಪುಗೊಂಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

೨೦೨೬ರ ಮುಂಗಾರು ಹಂಗಾಮಿಗೆ ಅಗತ್ಯ ಪ್ರಮಾಣದ ಬಿತ್ತನೆ ಬೀಜ ಲಭ್ಯವಿದ್ದು, ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಕೃಷಿ ಇಲಾಖೆ ಸ್ಪಷ್ಟಪಡಿಸಿದೆ. ರೈತರ ಸಂಪರ್ಕ ಕೇಂದ್ರಗಳ ಮೂಲಕ ಕ್ಯೂಆರ್ ವ್ಯವಸ್ಥೆ ಅಳವಡಿಸಿ ಅರ್ಹ ರೈತರಿಗೆ ಪಾರದರ್ಶಕವಾಗಿ ಬೀಜ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಬಿತ್ತನೆ ಬೀಜಗಳ ಕುರಿತ ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಕೇಂದ್ರ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಇಲ್ಲವೇ ಜಂಟಿ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಹಾವೇರಿ ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದ ಪ್ರಸಕ್ತ ವರ್ಷಕ್ಕೆ ಸೋಯಾಬೀನ್‌ಗೆ ೮ ಸಾವಿರದ ೯೬೦ ಕ್ವಿಂಟಾಲ್, ಶೇಂಗಾಬೀಜಕ್ಕೆ ೧ ಸಾವಿರದ ೩೪೪ ಕ್ವಿಂಟಾಲ್ ಬೇಡಿಕೆ ಅಂದಾಜಿಸಲಾಗಿದೆ. ಬೇಡಿಕೆ ಆಧಾರದಲ್ಲಿ ಬಿತ್ತನೆ ಬೀಜ ಪೂರೈಸಲಾಗುವುದು ಎಂದು ಕೃಷಿ ಇಲಾಖೆ ಸ್ಪಷ್ಟಪಡಿಸಿದೆ.

<><*<><>*><>

ಹವಾಮಾನ ಬದಲಾವಣೆ ಮತ್ತು ಅಂತರ್ಜಲದ ಅತಿಯಾದ ಬಳಕೆಯಿಂದ ಭವಿಷ್ಯದಲ್ಲಿ ಎದುರಾಗಬಹುದಾದ ಜಲಕ್ಷಾಮವನ್ನು ತಪ್ಪಿಸಲು ಶಾಲಾ ಹಂತದಲ್ಲೇ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಶೈಕ್ಷಣಿಕ, ಸಂಶೋಧನೆ ಮತ್ತು ತರಬೇತಿ ಮಂಡಳಿ-ಎನ್‌ಸಿಇಆರ್‌ಟಿ ಪಠ್ಯಕ್ರಮದಲ್ಲಿ ಅಂತರ್ಜಲ ಕುರಿತ ಪ್ರತ್ಯೇಕ ಪಠ್ಯಕ್ರಮವನ್ನು ಅಳವಡಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಂ.ಬೋಸರಾಜು ತಿಳಿಸಿದ್ದಾರೆ. ಮಳೆನೀರು ಕೊಯ್ಲು ಮತ್ತು ಕೃತಕ ಅಂತರ್ಜಲ ಮರುಪೂರಣ ತಂತ್ರಜ್ಞಾನಗಳು, ಪ್ರಕೃತಿ ಆಧಾರಿತ ಪರಿಹಾರಗಳು, ಅಂತರ್ಜಲ ನಕ್ಷೆ ಮತ್ತು ಮಾಡೆಲಿಂಗ್, ಅತ್ಯಾಧುನಿಕ ನಿಗಾ ತಂತ್ರಜ್ಞಾನಗಳಾದ ಐಒಟಿ ಮತ್ತು ರಿಮೋಟ್ ಸೆನ್ಸಿಂಗ್ ಬಳಕೆ, ನೀತಿ ಆಯೋಗದ ವಿವಿಧ ಜಲಸಂರಕ್ಷಣಾ ಯೋಜನೆಗಳನ್ನು ಪಠ್ಯದಲ್ಲಿ ಸೇರಿಸಬೇಕೆಂದು ಪತ್ರದಲ್ಲಿ ತಿಳಿಸಲಾಗಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಬಾರಿಯ ಆಯವ್ಯಯದಲ್ಲಿ ಘೋಷಿಸಿರುವಂತೆ ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ ಮಿತ್ರ ಜವಳಿ ಪಾರ್ಕ್' ಯೋಜನೆಯ ಕಾಮಗಾರಿಗಳನ್ನು ಚುರುಕುಗೊಳಿಸಲು ಸರ್ಕಾರ ನಿರ್ಧರಿಸಿದೆ. ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಇಂದು ನಡೆಸಿದ ಕೈಮಗ್ಗ ಮತ್ತು ಜವಳಿ ಇಲಾಖೆ ಹಾಗೂ ಕೈಗಾರಿಕಾ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಆಯವ್ಯಯದ ಘೋಷಣೆಯನ್ನು ಕಾಲಮಿತಿಯಲ್ಲಿ ಜಾರಿಗೆ ತರಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

<><*<><>*><>

ಕಲ್ಯಾಣ ಕರ್ನಾಟಕ ಭಾಗದ ಬೀದರ್ ಮತ್ತು ಕಲಬುರಗಿ ಜಿಲ್ಲಾ ಕೇಂದ್ರಗಳಿಗೆ ಜೂನ್ ೧ ಹಾಗೂ ಜೂನ್ ೧೦ರಿಂದ ಬೆಂಗಳೂರಿನಿಂದ ವಿಮಾನ ಸೇವೆಯನ್ನು ಪುನರಾರಂಭಿಸಲಾಗುವುದು ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಈ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡೂ ಕಡೆಯ ವಿಮಾನ ಪ್ರಯಾಣಕ್ಕೆ ಈಗಾಗಲೇ

ಮುಂಗಡ ಬುಕ್ಕಿಂಗ್ ಆರಂಭವಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ೨ ಮತ್ತು ೩ನೇ ಸ್ತರದ ನಗರಗಳಿಗೆ ವಿಮಾನ ಸಂಪರ್ಕ ಕಲ್ಪಿಸುವುದರಿಂದ ಪ್ರಾದೇಶಿಕ ಅಭಿವೃದ್ಧಿ ಜೊತೆಗೆ ಮೂಲಸೌಕರ್ಯ ಸುಧಾರಿಸಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಕೊಡಗು ಜಿಲ್ಲೆಯ ದುಬಾರೆ ಸಾಕಾನೆ ಶಿಬಿರದಲ್ಲಿ ಸಂಭವಿಸಿದ ದುರಂತಕ್ಕೆ ಸಂಬಂಧಿಸಿದಂತೆ ಉಪಲೋಕಾಯುಕ್ತ ಕೆ.ಎಸ್. ಫಣೀಂದ್ರ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲಾಗಿರುವ ದೂರಿನಲ್ಲಿ, ದುಬಾರೆ ಸಾಕಾನೆ ಶಿಬಿರದಲ್ಲಿ ಯಾವುದೇ ಸುರಕ್ಷತಾ ಕ್ರಮ ಕೈಗೊಂಡಿರಲಿಲ್ಲ. ಸುರಕ್ಷತೆ ನೀಡಲು ಅರಣ್ಯಾಧಿಕಾರಿಗಳು ವಿಫಲರಾಗಿರುವುದು ಸ್ಪಷ್ಟವಾಗಿದೆ. ಈ ನಿಟ್ಟಿನಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಎ.ಎ.ಗೋಪಾಲ್ ಮತ್ತು ವಲಯ ಅರಣ್ಯಾಧಿಕಾರಿ ರಕ್ಷಿತ್ ಅವರನ್ನು ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿವಾದಿಗಳನ್ನಾಗಿಸಿ, ದುಬಾರೆಯಲ್ಲಿ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಈ ಕುರಿತ ವರದಿ ಸಲ್ಲಿಸುವಂತೆ ಉಪಲೋಕಾಯುಕ್ತರು ಸೂಚಿಸಿದ್ದಾರೆ.

<><*<><>*><>

ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಬೇಸೂರು ಗ್ರಾಮದಲ್ಲಿ ಅಣುಸ್ಥಾವರ ಸ್ಥಾಪಿಸಲು ಬಿಡುವುದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧುಬಂಗಾರಪ್ಪ ತಿಳಿಸಿದ್ದಾರೆ. ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹೈಕೋರ್ಟ್ ಸಂಚಾರಿ ಪೀಠ ಸ್ಥಾಪನೆಗೆ ಯಾವುದೇ ಆಕ್ಷೇಪ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ಇಂದು ಕೆಡಿಪಿ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಶಿವಮೊಗ್ಗದಲ್ಲಿ ಹೈಕೋರ್ಟ್ ಸಂಚಾರಿ ಪೀಠ ಆಗಬೇಕೆಂದು ವಕೀಲರ ಸಂಘ ಸೇರಿದಂತೆ ಸಂಘ ಸಂಸ್ಥೆಗಳು, ಜನಪ್ರತಿನಿಧಿಗಳು ಹೋರಾಟ ನಡೆಸುತ್ತಿದ್ದು, ಪಕ್ಷಾತೀತವಾಗಿ ಕೈಗೊಂಡ ನಿರ್ಣಯ ಕುರಿತಾದ ಸಹಿ ಹೊಂದಿದ ಪ್ರತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ ಒತ್ತಡ ಹೇರಲು ಸಭೆಯಲ್ಲಿ ನಿರ್ಧರಿಸಲಾಗಿದೆ.

<><*<><>*><>

ಕಲಬುರಗಿಯ ಲಾಡ್ಲೆ ಮಾಶಾಕ್ ದರ್ಗಾ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಎಲ್ಲಾ ಅಂಶಗಳನ್ನು ಸಂಪುಟದಲ್ಲಿ ಚರ್ಚೆ ನಡೆಸಿ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರವು ಈ ವಿಷಯವನ್ನು ಸಂಪುಟ ಉಪಸಮಿತಿಗೆ ನೀಡಿದ್ದು, ಪ್ರತ್ಯೇಕವಾಗಿ ಚರ್ಚಿಸಿ, ಒಟ್ಟು ೫೨ ಪ್ರಕರಣಗಳನ್ನು ಹಿಂಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಲಾಡ್ಲೆ ಮಾಶಾಕ್ ದರ್ಗಾದಲ್ಲಿ ನಡೆದ ಹಿಂಸಾಚಾರಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಹಿಂತೆಗೆದುಕೊಂಡ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸರ್ಕಾರ ಅಲ್ಪ ಸಂಖ್ಯಾತರ ಓಲೈಕೆಯಲ್ಲಿ ತೊಡಗಿಕೊಂಡಿದೆ ಎಂದು ದೂರಿದ್ದಾರೆ.

<><*<><>*><>

ಕೇಂದ್ರ ಲೋಕಸೇವಾ ಆಯೋಗದ ವತಿಯಿಂದ ಬೆಂಗಳೂರಿನಲ್ಲಿ ಭಾನುವಾರ ಲೋಕಸೇವಾ ಆಯೋಗದ ಪ್ರಿಲಿಮಿನರಿ ಪರೀಕ್ಷೆ ನಡೆಯಲಿದೆ. ನಗರದ ಒಟ್ಟು ೭೩ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು,

ಯಾವುದೇ ಅಹಿತಕರ ಘಟನೆ ನಡೆಯದಂತೆ ಹಾಗೂ ಪರೀಕ್ಷೆಯು ಸುಗಮವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ೨೦೦ ಮೀಟರ್ ಪ್ರದೇಶವನ್ನು ನಿಷೇಧಿತ ಸ್ಥಳ ಎಂದು ಘೋಷಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೈಬರ್ ಜೆರಾಕ್ಸ್, ಕಂಪ್ಯೂಟರ್ ಕೇಂದ್ರಗಳನ್ನು ಮುಚ್ಚುವಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಆದೇಶ ಹೊರಡಿಸಿದ್ದಾರೆ. ಇದೇ ವೇಳೆ, ಬಿಎಂಆರ್‌ಸಿಎಲ್ ಭಾನುವಾರ ಮೆಟ್ರೋ ರೈಲು ಸೇವೆಯನ್ನು ಬೆಳಗ್ಗೆ ೭ ಗಂಟೆ ಬದಲಾಗಿ ೬ ಗಂಟೆಗೆ ಆರಂಭಿಸಲು ನಿರ್ಧರಿಸಿದೆ.

**<><*<><>*><>**

ರಾಜ್ಯದ ಹಲವೆಡೆ ಮುಂಗಾರು ಪೂರ್ವ ಮಳೆ ಆರಂಭಗೊಂಡಿದೆ.ಮುಂಗಾರು ಹಂಗಾಮಿನಲ್ಲಿ ಮಳೆಯಿಂದಾಗಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಲಿದ್ದು ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಮಳೆಯಿಂದಾಗಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸರ್ವಸನ್ನದ್ಧವಾಗಿದೆ. ಮಳೆಗಾಲದಲ್ಲಿ ಪ್ರಕೃತಿ ವಿಕೋಪ, ಪ್ರವಾಹದಲ್ಲಿ ಜೀವ ಹಾನಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಅಧಿಕಾರಿಯ ಮೊದಲ ಆದ್ಯತೆಯಾಗಿದ್ದು, ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಳೆಯಿಂದ ಅಪಾರ ಪ್ರಮಾಣದ ಬೆಳೆಹಾನಿ ಉಂಟಾಗಿದೆ. ರೈತರಿಗೆ ಪರಿಹಾರ ನೀಡಲು ಪರಿಹಾರ ಪೋರ್ಟಲ್‌ನಲ್ಲಿ ವರದಿ ದಾಖಲಿಸಿದ್ದು ಇನ್ನು ೧೫ ರಿಂದ ೨೦ ದಿನಗಳಲ್ಲಿ ಪರಿಹಾರ ಮಂಜೂರಾಗಲಿದೆ ಎಂದು ಅಪರ ಜಿಲ್ಲಾಧಿಕಾರಿ ಅಭಿಷೇಕ್ ವಿ ತಿಳಿಸಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿ ನಿವೇಶನ ರಹಿತ ಬಡ ಕುಟುಂಬಗಳಿಗೆ ೫೦೦ ನಿವೇಶನ ಹಂಚಿಕೆ ಸಂಬಂಧ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.

೨. ಹಾಸನ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹೊಸದಾಗಿ ನಿರ್ಮಾಣವಾಗಿರುವ ಬಡಾವಣೆಯಲ್ಲಿ ಫಲಾನುಭವಿಗಳಿಗೆ ವಿತರಿಸಲು ೧೩ ಸಾವಿರದ ೯೦೯ ನಿವೇಶನಗಳು ಸಿದ್ಧವಾಗಿದ್ದು, ಲಾಟರಿ ಮೂಲಕ ಹಂಚಲಾಗುವುದು ಎಂದು ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಟೇಲ್ ಶಿವಣ್ಣ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**